# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 998 |
| ಸದಸ್ಯರ ಹೆಸರು | : | ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 10.03.2021 |

********

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಕಮಲನಗರ, ಚಿಟಗುಪ್ಪ ಹಾಗೂ ಹುಲಸೂರು ಹೊಸ ತಾಲ್ಲೂಕುಗಳಾಗಿ ಘೋಷಣೆ ಆಗಿದ್ದು, ಈ ತಾಲ್ಲೂಕುಗಳಿಗೆ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸ್ಥಳ ಗುರುತಿಸಲಾಗಿದೆಯೆ; ಗುರುತಿಸಿದ್ದಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ಯಾವಾಗ; ಈ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; | ಹೌದು<br><br>ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ಇವರಿಂದ ಮಿನಿ ವಿಧಾನಸೌಧ ನಿರ್ಮಿಸುವ ಬಗ್ಗೆ ಪ್ರಸ್ತಾವನೆ ಸ್ವೀಕೃತವಾದ ನಂತರ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಪರಿಶೀಲಿಸಲಾಗುತ್ತದೆ. |
| ಆ) | ತಾಲ್ಲೂಕುಗಳಾಗಿ ಘೋಷಣೆಯಾದ ಮೇಲೆ ಈ ತಾಲ್ಲೂಕುಗಳಲ್ಲಿ ಯಾವ ಯಾವ ಸರ್ಕಾರಿ ಕಛೇರಿಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಯಾವ ಯಾವ ಕಛೇರಿಗಳು ಕಾರ್ಯನಿರ್ವಹಿಸುತ್ತಿಲ್ಲ; ಈ ಕಛೇರಿಗಳು ಪ್ರಾರಂಭಕ್ಕೆ ವಿಳಂಬವಾಗಲು ಕಾರಣಗಳೇನು? | ಬೀದರ ಜಿಲ್ಲೆಯಲ್ಲಿ ನೂತನವಾಗಿ ರಚಿಸಲಾಗಿರುವ ಹುಲಸೂರ, ಕಮಲನಗರ, ಮತ್ತು ಚಿಟಗುಪ್ಪಾ ತಾಲ್ಲೂಕುಗಳಲ್ಲಿ ತಹಶೀಲ್ದಾರ್ ಕಛೇರಿಗಳು ಹಾಗೂ ತಾಲ್ಲೂಕು ಪಂಚಾಯತ ಕಛೇರಿ, ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ, ಸಹಾಯಕ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಸಹಾಯಕ ನಿರ್ದೇಶಕರು, ಪಶು ಸಂಗೋಪನ ಹಾಗೂ ಪಶುಪಾಲನಾ ಇಲಾಖೆ, ಸಹಾಯಕ ನಿರ್ದೇಶಕರು, ಖಜಾನೆ ಇಲಾಖೆ, ತಾಲ್ಲೂಕು ನೋಂದಣಾಧಿಕಾರಿಗಳ ಕಛೇರಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳನ್ನು ಪ್ರಾರಂಭಿಸಲಾಗಿದೆ. ಸದರಿ ಕಛೇರಿಗಳು ಕಾರ್ಯನಿರ್ವಹಿಸುತ್ತಿವೆ.<br><br>ಇತರೆ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳನ್ನು ಕೂಡಲೇ ಪ್ರಾರಂಭಿಸಲು ತುರ್ತು ಕ್ರಮ ಕೈಗೊಳ್ಳುವಂತೆ ಈಗಾಗಲೇ ಸರ್ಕಾರದಿಂದ ನಿರ್ದೇಶನ ನೀಡಲಾಗಿದೆ. |

ಕಂಇ 37 ಡಬ್ಲ್ಯೂಬಿಆರ್ 2021

(ಆರ್. ಅಶೋಕ)
ಕಂದಾಯ ಸಚಿವರು